# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: : 538 (623)

ಮಾನ್ಯ ಸದಸ್ಯರ ಹೆಸರು : ಶ್ರೀ ಸಿ.ಟಿ. ರವಿ (ವಿಧಾನಸಭೆಯಿಂದ ಚುನಾಯಿತರಾದವರು)

ಉತ್ತರಿಸುವ ಸಚಿವರು : ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು

ಉತ್ತರಿಸಬೇಕಾದ ದಿನಾಂಕ : 09-03-2026

<table>
<tr><th>ಕ್ರ. ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ)</td><td>ರಾಜ್ಯದ ಗಡಿ ಪ್ರದೇಶಗಳಲ್ಲಿ ಎಷ್ಟು ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢಶಾಲೆಗಳಿವೆ; ಕಳೆದ 3 ವರ್ಷದಿಂದ ದಾಖಲಾತಿ ಕೊರತೆಯ ಕಾರಣ ಮುಚ್ಚಿರುವ ಶಾಲೆಗಳೆಷ್ಟು; (ಜಿಲ್ಲಾವಾರು ವಿವರ ನೀಡುವುದು);</td><td>ರಾಜ್ಯದ ಎಲ್ಲಾ ಗಡಿ ಜಿಲ್ಲೆಯ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳ ಸಂಖ್ಯೆ:<br><table><tr><th>ಸರ್ಕಾರಿ ಪ್ರಾಥಮಿಕ ಶಾಲೆಗಳ ಸಂಖ್ಯೆ</th><th>ಸರ್ಕಾರಿ ಪ್ರೌಢ ಶಾಲೆಗಳ</th></tr><tr><td>1646</td><td>114</td></tr></table><br>ಸರ್ಕಾರದ ಯಾವುದೇ ಶಾಲೆಗಳನ್ನು ಮುಚ್ಚಿರುವುದಿಲ್ಲ ತಾತ್ಕಾಲಿಕವಾಗಿ ಸ್ಥಗಿತಗೊಳಿಸಲಾಗಿದೆ ಮಕ್ಕಳು ದಾಖಲಾದಲ್ಲಿ ಪುನ: ಪ್ರಾರಂಭಿಸಲಾಗುವುದು.</td></tr>
<tr><td>ಆ)</td><td>ಈ ಶಾಲೆಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು; ಶಾಲೆಗಳಲ್ಲಿ ಕನಿಷ್ಟ ಇರಬೇಕಾದ ವಿದ್ಯಾರ್ಥಿಗಳ ದಾಖಲಾತಿ ಸಂಖ್ಯೆ ಎಷ್ಟು;</td><td>ಈ ಶಾಲೆಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳ ಸಂಖ್ಯೆ:<br><table><tr><th>ಸರ್ಕಾರಿ ಪ್ರಾಥಮಿಕ ಶಾಲೆಗಳವಿದ್ಯಾರ್ಥಿಗಳ ಸಂಖ್ಯೆ</th><th>ಸರ್ಕಾರಿ ಪ್ರೌಢ ಶಾಲೆಗಳ ವಿದ್ಯಾರ್ಥಿಗಳ ಸಂಖ್ಯೆ</th></tr><tr><td>95768</td><td>33,109</td></tr></table><br>ಆರ್.ಟಿ.ಇ. ಕಾಯ್ದೆಯ ಮಾನದಂಡಗಳನ್ವಯ ಕನಿಷ್ಟ 30 ವಿದ್ಯಾರ್ಥಿಗಳ ದಾಖಲಾತಿಗೆ ಅವಕಾಶ ಕಲ್ಪಿಸಲಾಗಿದೆ.</td></tr>
</table>

| | | |
|---|---|---|
| ಇ) | ಗಡಿ ಪ್ರದೇಶದಲ್ಲಿರುವ ಈ ಶಾಲೆಗಳಿಗೆ ಸರ್ಕಾರ ವಿಶೇಷ ಗಮನ ನೀಡದೇ ಇರುವ ಕಾರಣ ವಿದ್ಯಾರ್ಥಿಗಳ ಕೊರತೆಯಿಂದಾಗಿ ಶಾಲೆಗಳನ್ನು ಮುಚ್ಚಿರುವುದು ನಿಜವೇ; | ಸರ್ಕಾರದ ಯಾವುದೇ ಶಾಲೆಗಳನ್ನು ಮುಚ್ಚಿರುವುದಿಲ್ಲ ತಾತ್ಕಾಲಿಕವಾಗಿ ಸ್ಥಗಿತಗೊಳಿಸಲಾಗಿದ್ದೆ, ಮಕ್ಕಳು ದಾಖಲಾದಲ್ಲಿ ಪುನ: ಪ್ರಾರಂಭಿಸಲಾಗುವುದು. |
| ಈ) | ಗಡಿ ಪ್ರದೇಶಗಳಲ್ಲಿರುವ ಶಾಲೆಗಳನ್ನು ಅಭಿವೃದ್ಧಿಪಡಿಸಿ, ವಿದ್ಯಾರ್ಥಿಗಳ ಹಾಜರಾತಿಯನ್ನು ಹೆಚ್ಚಿಸಲು ಸರ್ಕಾರ ನೀಡಿರುವ ವಿಶೇಷ ಆಧ್ಯತೆಗಳನ್ನು ಮತ್ತು ಕೈಗೊಂಡಿರುವ ಕ್ರಮಗಳೇನು? | ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ ಸೌಲಭ್ಯ/ ಸೌಕರ್ಯಗಳ ಕೊರತೆಯಿಂದ ವಿದ್ಯಾರ್ಥಿಗಳ ಸಂಖ್ಯೆ ಕಡಿಮೆಯಾಗದಂತೆ ನೋಡಿಕೊಳ್ಳುವಲ್ಲಿ ಸರ್ಕಾರವು ಈ ಕೆಳಕಂಡ ಆದ್ಯತಾ ಕ್ರಮಗಳನ್ನು ಕೈಗೊಂಡಿದೆ:<br>• ಪೂರ್ವ ಪ್ರಾಥಮಿಕ ಶಿಕ್ಷಣ ದಿಂದ ಪದವಿ ಪೂರ್ವ ಶಿಕ್ಷಣದವರೆಗೆ ಒಂದೇ ಸೂರಿನಡಿ ಶಿಕ್ಷಣ ಪಡೆಯುವ ಸಲುವಾಗಿ 309 ಕೆ.ಪಿ.ಎಸ್ ಶಾಲೆಗಳನ್ನು ಪ್ರಾರಂಭಿಸಲಾಗಿದೆ.<br>• 2025-26 ನೇ ಸಾಲಿನಲ್ಲಿ ಎ.ಡಿ.ಬಿ. ನೆರವಿನೊಂದಿಗೆ 500 ಶಾಲೆಗಳನ್ನು ಕೆ.ಪಿ.ಎಸ್. ಶಾಲೆಗಳನ್ನಾಗಿ ಅಭಿವೃದ್ಧಿಪಡಿಸಲು ಯೋಜಿಸಿದ್ದು, ಸರ್ಕಾರದ ಆದೇಶ ಸಂಖ್ಯೆ: ಇ.ಪಿ.64 ಎಂ.ಪಿ.ಇ. 2024 ಬೆಂಗಳೂರು ದಿನಾಂಕ: 15-10-2025ರಲ್ಲಿ 474 ಶಾಲೆಗಳನ್ನು ಕೆ.ಪಿ.ಎಸ್. ಆಗಿ ಉನ್ನತೀಕರಿಸಲು ಆದೇಶಿಸಿದೆ.<br>• ಸರ್ಕಾರದ ಆದೇಶ ಸಂಖ್ಯೆ: ಇಪಿ 64 ಎಂ.ಪಿ.ಇ 2025 ಬೆಂಗಳೂರು ದಿನಾಂಕ: 28-11-2025 ರಲ್ಲಿ ಕಲ್ಯಾಣ ಕರ್ನಾಟಕದ ಅಕ್ಷರ ಆವಿಷ್ಕಾರ ಯೋಜನೆಯಡಿಯಲ್ಲಿ 200 ಶಾಲೆಗಳನ್ನು ಕೆ.ಪಿ.ಎಸ್. ಆಗಿ ಉನ್ನತೀಕರಿಸಲು ಆದೇಶಿಸಿದೆ.<br>• ಶತಮಾನ ಪೂರೈಸಿದ ಶಾಲೆಗಳನ್ನು ಪಾರಂಪರಿಕ ಶಾಲೆಗಳೆಂದು ಗುರ್ತಿಸಿ ಶಾಲಾ ನವೀಕರಣಕ್ಕಾಗಿ ಸರ್ಕಾರದಿಂದ ಅನುದಾನವನ್ನು ಬಿಡುಗಡೆ |

| | | |
|---|---|---|
| | | ಶಾಲೆಗಳನು ಹಿರಿಯ ಪ್ರಾಥಮಿಕ (6-7ನೇ ತರಗತಿ) ಶಾಲೆಗಳನ್ನಾಗಿ ಮತ್ತು 50 ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗಳನ್ನು 8ನೇ ತರಗತಿಗೆ ಉನ್ನತೀಕರಿಸಿ ಆದೇಶಿಸಲಾಗಿರುತ್ತದೆ.<br>• ಸರ್ಕಾರದ ಆದೇಶ ಸಂಖ್ಯೆ:ಇಪಿ 222 ಪಿಬಿಎಸ್ 2025 ದಿನಾಂಕ: 19.07.2025ರಲ್ಲಿ 07 ಸರ್ಕಾರಿ ಶಾಲೆಗಳನ್ನು 2025-26ನೇ ಸಾಲಿಗೆ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಗಳನ್ನು ಹಿರಿಯ ಪ್ರಾಥಮಿಕ(6-7 ಮತ್ತು 8ನೇ ತರಗತಿ) ಶಾಲೆಗಳನ್ನಾಗಿ ಮತ್ತು ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗಳನ್ನು 8ನೇ ತರಗತಿಯವರೆಗೆ ಉನ್ನತೀಕರಿಸಲು ಸರ್ಕಾರದ ಮಂಜೂರಾತಿ ನೀಡಿ ಆದೇಶಿಸಲಾಗಿರುತ್ತದೆ.<br>• ಸರ್ಕಾರದ ಆದೇಶ ಸಂಖ್ಯೆ: ಇಪಿ 61ಎಸ್ ಓ ಹೆಚ್ 2025 ದಿನಾಂಕ: 16.09.2025ರಲ್ಲಿ 35 ಸರ್ಕಾರಿ ಶಾಲೆಗಳನ್ನು 2025-26ನೇ ಸಾಲಿಗೆ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಗಳನ್ನು ಹಿರಿಯ ಪ್ರಾಥಮಿಕ(6-7) ಮತ್ತು 8ನೇ ತರಗತಿ) ಶಾಲೆಗಳನ್ನಾಗಿ ಮತ್ತು ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗಳನ್ನು 8ನೇ ತರಗತಿಯವರೆಗೆ ಉನ್ನತೀಕರಿಸಲು ಸರ್ಕಾರದ ಮಂಜೂರಾತಿ ನೀಡಿ ಆದೇಶಿಸಲಾಗಿರುತ್ತದೆ.<br>• ಮಾನ್ಯ ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು ರವರ ಸುತ್ತೋಲೆ ಸಂಖ್ಯೆ-:ಎಡಿಎಂ2(4)ಶಾ.ಪ್ರಾಂ.1/2025-26/ 1786476: ದಿನಾಂಕ: 27/05/2025ರಲ್ಲಿ ದಾಖಲಾತಿ ಆಂದೋಲನ, ಸೇತುಬಂಧ ಹಾಗೂ ಮಿಂಚಿನ ಸಂಚಾರ ಕಾರ್ಯಕ್ರಮಗಳನ್ನು ಕೈಗೊಳ್ಳುವ ಬಗ್ಗೆ ಸುತ್ತೋಲೆ ಹೊರಡಿಸಲಾಗಿದೆ.<br>• ಈ ಕಛೇರಿ ಜ್ಞಾಪನ ಸಂಖ್ಯೆ:ಎಡಿ.ಎಂ2(4)29/2025-26/2035309ರ ದಿನಾಂಕ-29.01.2026ರನ್ವಯ ದಿನಾಂಕ 14.11.2025 ರಿಂದ 30.06.2026ರವರೆಗೆ ನಿರಂತರವಾಗಿ 6-18ರ ವಯೋಮಾನದ ಅರ್ಹ ಮಕ್ಕಳು ದಾಖಲಾತಿ ಜಾಗೃತ್ತಿ ಅಭಿಯಾನದಲ್ಲಿ ಹಮ್ಮಿಕೊಳ್ಳಬೇಕಾದ ಚಟುವಟಿಕೆಗಳನ್ನು ಸರ್ಕಾರಿ ಆದೇಶ ಸಂಖ್ಯೆ: ಇಪಿ 98 ಎಂ |

| | | |
|---|---|---|
| | | ಮಾಡಲಾಗುತ್ತಿದೆ.<br>• ಸರ್ಕಾರದ ಆದೇಶ ಸಂಖ್ಯೆ:ಇಪಿ176 ಪಿ.ಬಿ.ಎಸ್ 2025, ಬೆಂಗಳೂರು ದಿನಾಂಕ-14.11.2025ರ ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ 2025-26ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ ಸಂಖ್ಯೆ111(i)ರಲ್ಲಿ ಘೋಷಿಸಿರುವಂತೆ ರಾಜ್ಯದಲ್ಲಿ ಸಮಗ್ರ ಶಿಕ್ಷಣ ಯೋಜನೆಯಡಿ 1105 ಶಾಲೆಗಳು, 126 ಪಿ.ಎಂ.ಶ್ರೀ ಶಾಲೆಗಳು, ಕೆ.ಕೆ.ಆರ್.ಡಿ.ಬಿ ಯೋಜನೆಯಡಿ 1126 ಶಾಲೆಗಳು ಮತ್ತು1699 ಮ್ಯಾಗ್ನೆಟ್ ಶಾಲೆಗಳು ಸೇರಿದಂತೆ ಒಟ್ಟಾರೆ 4056 ಸರ್ಕಾರಿ ಶಾಲೆಗಳಲ್ಲಿ ಪೂರ್ವ ಪ್ರಾಥಮಿಕ ಶಿಕ್ಷಣ ತರಗತಿವಾರು LKG ಹಾಗೂ UKG ಪ್ರತ್ಯೇಕ ತರಗತಿಗಳನ್ನು ಪ್ರಾರಂಭಿಸಲು ಅನುಮತಿ ನೀಡಿ ಆದೇಶಿಸಿದೆ<br>[ ಒಟ್ಟು(2619+4056=6675)ಪೂರ್ವ ಪ್ರಾಥಮಿಕ ಶಾಲೆಗಳು]<br>• 2018-19ನೇ ಸಾಲಿನಿಂದ 2025-26ನೇ ಸಾಲಿನವರೆಗೆ ರಾಜ್ಯದ ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ 1 ನೇ ತರಗತಿಯಿಂದ ಪ್ರಸ್ತುತ ಇರುವ ಕನ್ನಡ /ಇತರೆ ಮಾಧ್ಯಮದ ಜೊತೆಗೆ ಒಟ್ಟು 9522 (ದ್ವಿಭಾಷಾ) (Bilingual) ಮಾಧ್ಯಮ ತರಗತಿಗಳನ್ನು ಪ್ರಾರಂಭಿಸಲು ಅನುಮತಿ ನೀಡಲಾಗಿರುತ್ತದೆ.<br>• ಈ ಕಛೇರಿ ಜ್ಞಾಪನ ಸಂಖ್ಯೆ: ಎಡಿಎಂ-2(4) ಕಿ.ಪ್ರಾ.ಶಾ.ಉ.01/2023-24 ದಿನಾಂಕ: 13.06.2024ರಲ್ಲಿ 2024-25ನೇ ಸಾಲಿಗೆ 55 ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಗಳನ್ನು ಹಿರಿಯ ಪ್ರಾಥಮಿಕ (6-7ನೇ ತರಗತಿ) ಶಾಲೆಗಳನ್ನಾಗಿ ಮತ್ತು 41 ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ 8ನೇ ತರಗತಿಗೆ ಉನ್ನತೀಕರಿಸಿ ಆದೇಶಿಸಲಾಗಿರುತ್ತದೆ.<br>• ಈ ಕಛೇರಿ ಜ್ಞಾಪನ ಸಂಖ್ಯೆ: ಎಡಿಎಂ-2(4) ಕಿ.ಪ್ರಾ.ಶಾ.ಉ.01/2023-24 ದಿನಾಂಕ: 22.07.2024ರಲ್ಲಿ 2024-25ನೇ ಸಾಲಿಗೆ 4 ಸರ್ಕಾರಿ ಕಿರಿಯ ಪ್ರಾಥಮಿಕ |

**<u>ಪ್ರೌಢ ಶಾಲೆಗಳಿಗೆ ಸಂಬಂಧಿಸಿದಂತೆ:</u>**

- ವಿದ್ಯಾರ್ಥಿಗಳಿಗೆ ಉಚಿತ ಪಠ್ಯಪುಸ್ತಕ, ಸಮವಸ್ತ್ರ, ಶೂ, ಸಾಕ್ಸ್ ಮಧ್ಯಾಹ್ನದ ಉಪಹಾರ ಕ್ಷೀರಭಾಗ್ಯ ಉಚಿತವಾಗಿ ನೀಡಲಾಗುತ್ತದೆ.
- ಶಾಲೆಗಳ ಮೂಲಭೂತ ಸೌಕರ್ಯ ಅಭಿವೃದ್ಧಿ ಪಡಿಸಲಾಗಿದೆ.
- ಗುಣಾತ್ಮಕ ಶಿಕ್ಷಣಕ್ಕಾಗಿ ನಿಯಮಿತವಾಗಿ ಶಿಕ್ಷಕರಿಗೆ ತರಬೇತಿ ಆಯೋಜಿಸಲಾಗುತ್ತದೆ.
- ಶಾಲೆಗಳಲ್ಲಿ ತಂತ್ರಜ್ಞಾನ ಆಧಾರಿತ ಶಿಕ್ಷಣವನ್ನು ಪ್ರೋತ್ಸಾಹಿಸಲಾಗುತ್ತಿದೆ.
- 74 ಶೈಕ್ಷಣಿಕವಾಗಿ ಹಿಂದುಳಿದ ತಾಲ್ಲೂಕುಗಳಲ್ಲಿ 6 ರಿಂದ 10ನೇ ತರಗತಿಯವರೆಗೆ ಮಾಧ್ಯಮದಲ್ಲಿ ಕೇಂದ್ರಿಯ ವಿದ್ಯಾಲಯ ಮಾದರಿಯಲ್ಲಿ ಆದರ್ಶ ವಿದ್ಯಾಲಯಗಳು (ಮಾದರಿ ಶಾಲೆಗಳು) ಪ್ರಾರಂಭಿಸಲಾಗಿದೆ.
- ವಿಶೇಷ ಚೇತನ ಮಕ್ಕಳಿಗೆ ವೈದ್ಯಕೀಯ ಶಿಬಿರಗಳನ್ನು ಏರ್ಪಡಿಸಲಾಗುತ್ತಿದೆ. ಮತ್ತು ನ್ಯೂನ್ಯತೆಗನುಗುಣವಾಗಿ ಸಾಧನ ಸಲಕರಣೆಗಳನ್ನು ನೀಡಲಾಗುತ್ತಿದೆ
- ಹೆಣ್ಣು ಮಕ್ಕಳ ಶಿಕ್ಷಣಕ್ಕೆ ಪ್ರೋತ್ಸಾಹ ನೀಡಲು 86 ವಸತಿ ನಿಲಯಗಳನ್ನು ಪ್ರಾರಂಭಿಸಲಾಗಿದೆ. ಸದರಿ ವಸತಿ ನಿಲಯಗಳಲ್ಲಿ ಯೋಗ, ಕರಾಟೆ, ಇತ್ಯಾದಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ.
- ಶಿಕ್ಷಣದಿಂದ ವಂಚಿತರಾದ ವಿದ್ಯಾರ್ಥಿಗಳನ್ನು ಗುರುತಿಸಿ. ಸಂಬಂಧಿಸಿದ ಪೋಷಕರು ಮತ್ತು ವಿದ್ಯಾರ್ಥಿಗಳನ್ನು ಮನವೊಲಿಸಿ. ಪುನ: ದಾಖಲಿಸಲಾಗುತ್ತಿದೆ. ಈ ಶಾಲೆಗೆ ಕಾರ್ಯವನ್ನು ಎಸ್.ಡಿ.ಎಂ.ಸಿ ಸ್ಥಳೀಯ ಸಂಸ್ಥೆಗಳು ಹಾಗೂ ಸಮುದಾಯದ ಸಹಕಾರದೊಂದಿಗೆ ನಿರ್ವಹಿಸಲಾಗುತ್ತಿದೆ.
- ಎಸ್.ಎ.ಟಿ.ಎಸ್ ವ್ಯವಸ್ಥೆ ಮೂಲಕ ವಿದ್ಯಾರ್ಥಿಗಳ ಸಾಧನೆಯನ್ನು ಜಾಡು ಹಿಡಿಯಲಾಗುತ್ತಿದೆ.
- ಶಾಲಾ ದತ್ತು ಯೋಜನೆ (ಸಿ.ಎಸ್.ಆರ್) ಮೂಲಕ ಶಿಕ್ಷಣದ

| | | |
|---|---|---|
| | | ಪಿ ಇ 2025ರ ದಿನಾಂಕ-13.11.2025ರ ಸುತ್ತೋಲೆಯಲ್ಲಿ ತಿಳಿಸಿರುವಂತೆ ಅಗತ್ಯ ಕ್ರಮಗಳನ್ನು ಕೈಗೊಂಡು ದಾಖಲಾತಿ ಆಂದೋಲನವನ್ನು ಅರ್ಥಪೂರ್ಣ ಗೊಳಿಸುವಂತೆ ರಾಜ್ಯದ ಎಲ್ಲಾ ಜಿಲ್ಲಾ ಉಪನಿರ್ದೇಶಕರಿಗೆ ಸೂಚಿಸಲಾಗಿದೆ.<br>• ಸರ್ಕಾರದ ಆದೇಶ ಸಂಖ್ಯೆ ಇಪಿ 105 ಎಂ ಪಿ ಇ 2024, ಬೆಂಗಳೂರು ದಿನಾಂಕ-29.01.2026ರಲ್ಲಿ ರಾಜ್ಯದ ಎಲ್ಲಾ ಕೆ.ಪಿ.ಎಸ್. ಶಾಲೆಗಳು, ಎಲ್ಲಾ ಪಿ.ಎಂ.ಶ್ರೀ ಶಾಲೆಗಳು, ಎಲ್ಲಾ ದ್ವಿಭಾಷಾ ತರಗತಿಗಳನ್ನು ಪ್ರಾರಂಭಿಸಿರುವ ಸರ್ಕಾರಿ ಶಾಲೆಗಳು, ಎಲ್ಲಾ ಪೂರ್ವ ಪ್ರಾಥಮಿಕ ತರಗತಿಗಳನ್ನು ಪ್ರಾರಂಭಿಸಿರುವ ಸರ್ಕಾರಿ ಶಾಲೆಗಳು, ಗಣಿಬಾಧಿತ ತಾಲ್ಲೂಕುಗಳಾದ ಚಿತ್ರದುರ್ಗ, ಹೊಳಲ್ಕೆರೆ, ಮೊಳಕಾಲೂರು, ಹೊಸದುರ್ಗ, ಚಿಕ್ಕನಾಯಕನಹಳ್ಳಿ, ಗುಬ್ಬಿ, ತಿಪಟೂರು, ಬಳ್ಳಾರಿ, ಸಂಡೂರು, ಮತ್ತು ಹೊಸಪೇಟೆ ತಾಲ್ಲೂಕುಗಳಲ್ಲಿನ ಎಲ್ಲಾ ಸರ್ಕಾರಿ ಶಾಲೆಗಳು ಮತ್ತು 15 ಜಿಲ್ಲೆಗಳಾದ ಬೆಂಗಳೂರು ಉತ್ತರ, ಬೆಂಗಳೂರು ದಕ್ಷಿಣ, ಬೆಂಗಳೂರು ಗ್ರಾಮಾಂತರ, ರಾಮನಗರ, ಹಾವೇರಿ, ಕಲಬುರಗಿ, ಶಿವಮೊಗ್ಗ, ಹಾಸನ, ತುಮಕೂರು, ದಕ್ಷಿಣ ಕನ್ನಡ, ಕೋಲಾರ, ಧಾರವಾಡ, ಬಾಗಲಕೋಟೆ, ವಿಜಯಪುರ, ಕೊಪ್ಪಳ ಜಿಲ್ಲೆಗಳ ಎಲ್ಲಾ ಸರ್ಕಾರಿ ಶಾಲೆಗಳಲ್ಲಿ 1 ರಿಂದ 5 ನೇ ತರಗತಿಗಳಿಗೆ ಏಕತರಗತಿ ದ್ವಿಭಾಷಾ ಪಠ್ಯಪುಸ್ತಕ ಗಳನ್ನು ನೀಡಲು ಆದೇಶಿಸಲಾಗಿದೆ.<br>• ಶೈಕ್ಷಣಿಕ ಸ್ಥಿತಿಗತಿಗಳಿಗೆ ಅನುಗುಣವಾಗಿ ಕಲಿಕಾ ಶೈಲಿಯ ಬದಲಾವಣೆ, ಆಧುನಿಕ ಕಲಿಕಾ ವಿಧಾನಗಳ ಅಳವಡಿಕೆ, ಮೂಲ ಭೂತ ಸೌಕರ್ಯಗಳು ಹಾಗೂ ಶಿಕ್ಷಕರ ಕೊರತೆ ಇಲ್ಲದಂತೆ ನೋಡಿಕೊಳ್ಳುವುದರೊಂದಿಗೆ ಸರ್ಕಾರಿ ಶಾಲೆಗಳಲ್ಲಿ ಬೋಧನಾ ಗುಣಮಟ್ಟ ಮತ್ತು ಕಲಿಕಾ ಫಲಿತಾಂಶವನ್ನು ಸುಧಾರಿಸಲು ಪಠ್ಯ ಆಧಾರಿತ ಮೌಲ್ಯಮಾಪನ (Lesson Based Assesement)ವನ್ನು ಜಾರಿಗೊಳಿಸಲಾಗಿದೆ |

| | | |
|---|---|---|
| | | ಗುಣಮಟ್ಟವನ್ನು ಉತ್ತಮ ಪಡಿಸಲಾಗುತ್ತಿದೆ.<br>• 6 ಮತ್ತು 8ನೇತರಗತಿಗೆ 12429 ಜಿ.ಪಿ.ಟಿ ಶಿಕ್ಷಕರ ನೇಮಾಕಾತಿ ಮಾಡಿಕೊಳ್ಳುವ ಮೂಲಕ ಗುಣಾತ್ಮಕ ಶಿಕ್ಷಣಕ್ಕಾಗಿ ಕ್ರಮವಹಿಸಲಾಗಿದೆ<br>• 2021-22 & 2022-23ರಲ್ಲಿ ಕಲಿಕಾ ಚೇತರಿಕೆ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸಿ ಶಿಕ್ಷಕರಿಗೆ ಕೋವಿಡ್ ಸಮಯದಲ್ಲಿ ತರಬೇತಿ ನೀಡಿ ಶಾಲೆಯಲ್ಲಿ ಗುಣಮಟ್ಟದ ಶಿಕ್ಷಣ ನೀಡಲು ಒತ್ತು ನೀಡಲಾಗಿದೆ.<br>• 2024-25ನೇ ಸಾಲಿನಲ್ಲಿ ರಾಜ್ಯಾದ್ಯಂತ ಖಾಲಿ ಇರುವ ಹುದ್ದೆಗಳಿಗೆದುರಾಗಿ ತಾತ್ಕಾಲಿಕವಾಗಿ ಪ್ರಾಥಮಿಕ ಶಾಲೆಗಳಿಗೆ 35000 ಅತಿಥಿ ಶಿಕ್ಷಕರನ್ನು ಮತ್ತು ಪ್ರೌಢಶಾಲೆಗಳಿಗೆ 9095 ಅತಿಥಿ ಶಿಕ್ಷರನ್ನು ನೇಮಿಸಿಕೊಂಡು ಮಕ್ಕಳ ಬೋಧನೆಗೆ ತೊಂದರೆಯಾಗದಂತೆ ನೇಮಿಸಿಕೊಂಡು ಮಕ್ಕಳ ಕಲಿಕೆಗೆ ಪ್ರೋತ್ಸಾಹಿಸಲಾಗಿರುತ್ತದೆ.<br>• ಪ್ರಸ್ತುತ 2024-25ನೇ ಸಾಲಿನ ಶೈಕ್ಷಣಿಕ ವರ್ಷದಲ್ಲಿ ಹಾಲಿ ನಡೆಯುತ್ತಿರುವ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಗಳ ಪೈಕಿ 55 ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಗಳನ್ನು ಹಿರಿಯ ಪ್ರಾಥಮಿಕ ಶಾಲೆಗಳನ್ನಾಗಿ ಉನ್ನತೀಕರಿಸಲಾಗಿರುತ್ತದೆ. ಹಾಗೂ 1 ರಿಂದ 7ನೇತರಗತಿ ನಡೆಯುತ್ತಿರುವ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗಳ ಪೈಕಿ 41 ಶಾಲೆಗಳನ್ನು 8ನೇತರಗತಿಗೆ ಉನ್ನತೀಕರಿಸಲಾಗಿರುತ್ತದೆ.<br>• ರಾಜ್ಯದ ಸರ್ಕಾರಿ ಮತ್ತು ಅನುದಾನಿತ ಶಾಲೆಗಳಿಂದ ಸಾಧನೆ ಮಾಡಿದ ಶಿಕ್ಷಕರುಗಳಿಗೆ ರಾಜ್ಯ ಮಟ್ಟದ ಉತ್ತಮ ಶಿಕ್ಷಕ ಪ್ರಶಸ್ತಿ ಪ್ರಧಾನ ಮಾಡಿ ಸನ್ಮಾನಿಸಲಾಗುತ್ತಿದೆ. ಇದರಿಂದಾಗಿ ಶಿಕ್ಷಕರು ತಮ್ಮ ಬೋಧನಾ ಸಾಮರ್ಥ್ಯವನ್ನು ಹೆಚ್ಚಿಸಿಕೊಳ್ಳುವುದರೊಂದಿಗೆ ಪರಿಣಾಮಕಾರಿ ಪಾಠ ಬೋಧನೆಗೆ ಶ್ರಮಿಸುವರು.<br>• ಪ್ರತಿ ವರ್ಷ ರಾಜ್ಯದಲ್ಲಿ 8 ಉತ್ತಮ ಶಾಲೆಯನ್ನು ಗುರ್ತಿಸಿ, ಸ್ವಾಭಿಮಾನಿ ಶಾಲೆಗಳಾಗಿ ಆಯ್ಕೆ ಮಾಡಿ ಸರ್ಕಾರದಿಂದ |

| | | | |
|---|---|---|---|
| | | | ಅನುದಾನವನ್ನು ನೀಡಲಾಗುತ್ತಿದೆ.<br>• ರಾಜ್ಯದ ಎಲ್ಲಾ ಶಾಲೆಗಳಿಗೆ ಸಿ.ಆರ್.ಪಿ, ಬಿ.ಆರ್.ಪಿ. ಬಿ.ಆರ್.ಸಿ ಡಯಟ್ ಉಪನ್ಯಾಸಕರು ವಿಷಯ ಪರಿವೀಕ್ಷಕರು ಹಾಗೂ ನೋಡಲ್ ಅಧಿಕಾರಿಗಳು ಪ್ರತಿ ಮಾಹೆ ಸದರಿ ಶಾಲೆಗಳ ಭೇಟಿ ನೀಡುವುದರೊಂದಿಗೆ ಅಗತ್ಯ ಸಲಹೆ, ಸೂಚನೆ, ಮಾರ್ಗದರ್ಶನ ನೀಡಿ ಅನುಪಾಲನೆ ಮಾಡಲು ಸೂಚಿಸಲಾಗಿರುತ್ತದೆ<br>• ಪಿ.ಆರ್.ಡಿ.ಎಫ್. ಯೋಜನೆಯಡಿ ಗ್ರಾಮ ಸಭೆ ನಡೆಸುವ ಮೂಲಕ ಮಕ್ಕಳ ಆಂದೋಲನವನ್ನು ಹಮ್ಮಿಕೊಂಡು ಮಕ್ಕಳ ದಾಖಲಾತಿ ಹೆಚ್ಚಿಸಲು ಕ್ರಮವಹಿಸುವುದು.<br>• ಎನ್.ಟಿ.ಎಸ್.ಇ /ಎನ್.ಎಂ.ಎಂ.ಎಸ್ ಪರೀಕ್ಷೆಗಳಲ್ಲಿ ಉತ್ತೀರ್ಣರಾದ ವಿದ್ಯಾರ್ಥಿಗಳಿಗೆ ಡಿ.ಎಸ್.ಇ.ಆರ್.ಟಿ & ಎಂ.ಹೆಚ್. ಆರ್.ಡಿ ಮೂಲಕ ವಿದ್ಯಾರ್ಥಿ ವೇತನ ನೀಡಿ ಪ್ರೋತ್ಸಾಹಿಸಲಾಗುತ್ತಿದೆ.<br><br>ಶಾಲೆ ಬಿಟ್ಟ ಮಕ್ಕಳನ್ನು ಮರಳಿ ಶಾಲೆಗೆ ಕರೆತರಲು ಪ್ರತಿ ಬ್ಲಾಕ್‌ನಲ್ಲಿ ನೋಡಲ್ ಅಧಿಕಾರಿಗಳ ನೇಮಿಸಿ ಪೋಷಕರ & ಮಕ್ಕಳ ಮನವೊಲಿಸಿ ಶಾಲೆಗೆ ಕರೆತರಲು ಕ್ರಮವಹಿಸಲಾಗುತ್ತಿದೆ |

**ಇಪಿ 22 ಪಿಎಂಎ 2026**

**(ಎಸ್. ಮಧು ಬಂಗಾರಪ್ಪ)**
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ
ಸಚಿವರು